ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

20

ಶಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE: 6/2/2021

# ಪಂಚಮಸಾಲಿ ಅಧ್ಯಯನಕ್ಕೆ ಸಿಎಂ ಸೂಚನೆ

## ಸಮುದಾಯದ ಸ್ಥಿತಿಗತಿ ಬಗ್ಗೆ ಸಮಗ್ರ ವರದಿ ಸಲ್ಲಿಸಲು ಹಿಂದುಳಿದ ವರ್ಗಗಳ ಆಯೋಗಕ್ಕೆ ಪತ್ರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 6/2/21

ಲಿಂಗಾಯತ ಪಂಚಮಸಾಲಿ ಜನಾಂಗದ ಸ್ಥಿತಿಗತಿ ಬಗ್ಗೆ ಸಮಗ್ರ ಅಧ್ಯಯನ ಮಾಡಿ ವರದಿ ಸಲ್ಲಿಸುವಂತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಸೂಚಿಸಿದ್ದಾರೆ.

ಪಂಚಮಸಾಲಿ ಜನಾಂಗಕ್ಕೆ ಹಿಂದುಳಿದ ವರ್ಗ 2ಎ ಮೀಸಲು ನೀಡುವಂತೆ ಒತ್ತಾಯಿಸಿ ಕೂಡಲಸಂಗಮದ ಪಂಚಮಸಾಲಿ ಪೀಠದ ಜಯಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಮುಖಂಡರು ಹಾಗೂ ಜನರು ಬೆಂಗಳೂರಿಗೆ ಪಾದಯಾತ್ರೆ ನಡೆಸಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಈ ನಿರ್ಧಾರ ಕೈಗೊಂಡಿದ್ದಾರೆ.


'ರಾಜ್ಯದ ಲಿಂಗಾಯತ ಪಂಚಮಸಾಲಿ ಜನಾಂಗದವರು ತಮ್ಮ ಸಮಾಜವು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಾಗೂ ಔದ್ಯೋಗಿಕವಾಗಿ ಹಿಂದುಳಿದಿದೆ ಮತ್ತು ಸಮಾಜದ ಕಡುಬಡವರಿಗೆ ತೊಂದರೆಯಾಗಿರುವುದರಿಂದ ತಮ್ಮ ಸಮಾಜವನ್ನು ಹಿಂದುಳಿದ ವರ್ಗ 2ಎ ಮೀಸಲಾತಿಗೆ ಒಳಪಡಿಸುವಂತೆ ಮನವಿ ಮಾಡಿದ್ದಾರೆ. ಕಾರಣ ಈ ಬಗ್ಗೆ ಸಮಗ್ರ ಅಧ್ಯಯನ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸಲು ಕೋರಿದೆ' ಎಂದು ಯಡಿಯೂರಪ್ಪ ಅವರು ಶುಕ್ರವಾರ ಸಂಜೆ ಹಿಂದುಳಿದ ವರ್ಗಗಳ ಆಯೋಗಕ್ಕೆ ಅಧಿಕೃತ ಟಿಪ್ಪಣಿ ರವಾನಿಸಿದ್ದಾರೆ.

**ಸಮುದಾಯಗಳ ಒಳಿತಿಗೆ ಬದ್ಧ- ಸಿಎಂ:** ಇದಕ್ಕೂ ಮೊದಲು ಶುಕ್ರವಾರ ವಿಧಾನಸಭೆಯಲ್ಲಿ ರಾಜ್ಯಪಾಲರ ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಉತ್ತರ ನೀಡುವ ವೇಳೆ ಪಂಚಮಸಾಲಿ ಸಮುದಾಯಕ್ಕೆ ಮೀಸಲಾತಿ ನೀಡುವ ಬಗ್ಗೆ ಆಡಳಿತಾರೂಢ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಪ್ರಸ್ತಾಪಿಸಿದರು. ಆಗ ಈ ವಿಷಯದಲ್ಲಿ ತರಾತುರಿ ನಿರ್ಧಾರ ಕೈಗೊಳ್ಳಲು ಸಾಧ್ಯವಿಲ್ಲ ಎಂಬ ಮಾತನ್ನು ಯಡಿಯೂರಪ್ಪ ಹೇಳಿದ್ದರು. ಈ ಹೇಳಿಕೆ ಬೆನ್ನಲ್ಲೇ ಜಯಮೃತ್ಯುಂಜಯ ಸ್ವಾಮೀಜಿ ಅವರು ಮುಖ್ಯಮಂತ್ರಿಗಳ ರಾಜೀನಾಮೆಗೆ ಆಗ್ರಹಿಸಿದ್ದರು. ↘9

### "ಸಮುದಾಯದ ಒಳಿತಿಗೆ ಬದ್ಧ

**ಜಯ ಮೃತ್ಯುಂಜಯ ಸ್ವಾಮೀಜಿಗಳು ನನ್ನ ಹೇಳಿಕೆಯನ್ನು ಅಪಾರ್ಥ ಮಾಡಿಕೊಂಡಿದ್ದಾರೆ. ರಾಜ್ಯದ ಎಲ್ಲ ಸಮುದಾಯಗಳ ಒಳಿತಿಗೆ ನಾನು ಬದ್ಧನಾಗಿದ್ದೇನೆ. ಇಂಥ ಗಂಭೀರ ವಿಷಯಗಳ ಬಗ್ಗೆ ತರಾತುರಿಯಲ್ಲಿ ನಿರ್ಧಾರ ತೆಗೆದುಕೊಳ್ಳದೆ, ತಜ್ಞರೊಂದಿಗೆ ಸಮಗ್ರವಾಗಿ ಚರ್ಚಿಸಿ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಮುಂದುವರೆಯಬೇಕಾಗುತ್ತದೆ. ಹಾಗಾಗಿ ಈ ನಿಟ್ಟಿನಲ್ಲಿ ನಾನು ತಮ್ಮೆಲ್ಲರ ಸಹಕಾರ ಕೋರುತ್ತೇನೆ.**

• **ಬಿ.ಎಸ್.ಯಡಿಯೂರಪ್ಪ**
ಮುಖ್ಯಮಂತ್ರಿ



ಪಂಚಮಸಾಲಿ ಸಮುದಾಯದ ಕುರಿತು ಸಮಗ್ರ ಅಧ್ಯಯನ ನಡೆಸಿ ವರದಿ ಸಲ್ಲಿಸಲು ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಬರೆದಿರುವ ಪತ್ರ.

# ಪಂಚಮಸಾಲಿ ಅಧ್ಯಯನಕ್ಕೆ ಮುಖ್ಯಮಂತ್ರಿ ಸೂಚನೆ

◄ ಮೊದಲ ಪುಟದಿಂದ 6/2/21

ಈ ಹಿನ್ನೆಲೆಯಲ್ಲಿ ಯಡಿಯೂರಪ್ಪ ಅವರು ಸಂಜೆ ಪ್ರಕಟಣೆ ಮೂಲಕ ಸ್ಪಷ್ಟನೆ ನೀಡಿ, ರಾಜ್ಯದ ಎಲ್ಲ ಸಮುದಾಯಗಳ ಒಳಿತಿಗೆ ನಾನು ಬದ್ಧನಾಗಿದ್ದೇನೆ. ಇಂಥ ಗಂಭೀರ ವಿಷಯಗಳ ಬಗ್ಗೆ ತರಾತುರಿಯಲ್ಲಿ ನಿರ್ಧಾರ ತೆಗೆದುಕೊಳ್ಳದೆ, ತಜ್ಞರೊಂದಿಗೆ ಸಮಗ್ರವಾಗಿ ಚರ್ಚಿಸಿ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಮುಂದುವರೆಯಬೇಕಾಗುತ್ತದೆ. ಹಾಗಾಗಿ ಈ ನಿಟ್ಟಿನಲ್ಲಿ ನಾನು ತಮ್ಮೆಲ್ಲರ ಸಹಕಾರ ಕೋರುತ್ತೇನೆ ಎಂದಿದ್ದಾರೆ.

**ನನ್ನ ಹೇಳಿಕೆ ಅಪಾರ್ಥ- ಬಿಎಸ್‌ವೈ:** ವಿಧಾನಸಭೆಯ ಅಧಿವೇಶನದಲ್ಲಿ ನಾನು ನೀಡಿದ ಹೇಳಿಕೆಯನ್ನು ಜಯಮೃತ್ಯುಂಜಯ ಸ್ವಾಮೀಜಿಗಳು ಅಪಾರ್ಥ ಮಾಡಿಕೊಂಡಿದ್ದಾರೆ. ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ನೀಡುವ ಬಗ್ಗೆ ನಾನು ಈಗಾಗಲೇ ಸಮುದಾಯದ ಸಚಿವರಾದ ಮುರುಗೇಶ್ ನಿರಾಣಿ, ಸಿ.ಸಿ.ಪಾಟೀಲ್ ಅವರನ್ನು ಒಳಗೊಂಡಂತೆ ಶಾಸಕರ ಜೊತೆ ಚರ್ಚಿಸಿದ್ದೇನೆ. ಅಲ್ಲದೆ, ಸಮುದಾಯದ



ಸ್ವಾಮೀಜಿಗಳು ಹಾಗೂ ಮುಖಂಡರನ್ನು ಭೇಟಿ ಮಾಡಿ ಮನವರಿಕೆ ಮಾಡಿಕೊಡುವಂತೆ ಗುರುವಾರ ಸಚಿವರಿಬ್ಬರನ್ನೂ ಕಳುಹಿಸಿಕೊಟ್ಟಿದ್ದೆ ಎಂದು ಯಡಿಯೂರಪ್ಪ ವಿವರಣೆ ನೀಡಿದರು.

ಅಧಿವೇಶನದಲ್ಲಿ ನಾನು ಹೇಳಿದ್ದು ಇಷ್ಟು, ನಮ್ಮದೊಂದು ರಾಷ್ಟ್ರೀಯ ಪಕ್ಷವಾಗಿದ್ದರಿಂದ ಎಲ್ಲ ಸಂಸತ್ ಸದಸ್ಯರ ಜೊತೆ ಚರ್ಚಿಸಿ ಮುಂದೆ ರಾಷ್ಟ್ರೀಯ ನಾಯಕರೊಂದಿಗೆ ಈ ವಿಷಯದ ಬಗ್ಗೆ ಮನವರಿಕೆ ಮಾಡಿಕೊಡಬೇಕಾಗಿದೆ. ನಮ್ಮ ಸರ್ಕಾರ ಈ ಹಿಂದೆ ಪಂಚಮಸಾಲಿ ಸಮಾಜವನ್ನು 3ಬಿಗೆ ಸೇರಿಸಿರುವುದನ್ನು ಈ ಸಂದರ್ಭದಲ್ಲಿ ನೆನಪಿಸಿಕೊಳ್ಳಬೇಕು ಎಂದು ಹೇಳಿದರು.

## ಮೀಸಲಾತಿಗೆ ಕೇಂದ್ರಕ್ಕೆ ನಿಯೋಗ ಒಯ್ಯಿರಿ!

### ಶಾಸಕ ಯತ್ನಾಳ್‌ಗೆ ಬಿಎಸ್‌ವೈ ಟಾಸ್ಕ್ | 25 ಸಂಸದರ ನಿಯೋಗ ಕರೆದೊಯ್ದು ಒತ್ತಡ ತನ್ನಿ

**ವಿಧಾನಸಭೆ:** 'ಪಂಚಮಸಾಲಿ ಹಾಗೂ ಕುರುಬ ಸಮುದಾಯಕ್ಕೆ ಮೀಸಲಾತಿ ವಿಚಾರದ ಬಗ್ಗೆ ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಬೇಕಿದೆ. ಈ ಸಂಬಂಧ ರಾಜ್ಯದ 25 ಬಿಜೆಪಿ ಸಂಸದರ ನಿಯೋಗ ಒಯ್ದು ನೀವೇ ಕೇಂದ್ರದ ಮೇಲೆ ಒತ್ತಡ ತನ್ನಿ…'

ಹೀಗಂತ ಹೇಳುವ ಮೂಲಕ ತಮ್ಮದೇ ಪಕ್ಷದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಮುಖ್ಯಮಂತ್ರಿ ಯಡಿಯೂರಪ್ಪ ಟಾಸ್ಕ್ ನೀಡಿದ್ದಾರೆ.

ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯದ ಪ್ರಸ್ತಾಪಕ್ಕೆ ಶುಕ್ರವಾರ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಅವರು ಉತ್ತರ ನೀಡಿದ ನಂತರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪಂಚಮಸಾಲಿ ಹಾಗೂ ಹಾಲುಮತ ಸಮುದಾಯಕ್ಕೆ ಮೀಸಲಾತಿ ನೀಡಬೇಕು ಎಂದು ಆಗ್ರಹಿಸಿ ಮೂರು ಪಕ್ಷಗಳ ಸದಸ್ಯರು ಸದನದಲ್ಲಿ ಧರಣಿ ನಡೆಸಿದ್ದೇವೆ. ಆದರೆ, ಆ ವಿಷಯದ ಬಗ್ಗೆ ಮುಖ್ಯಮಂತ್ರಿ ಅವರು ರಾಜ್ಯ ಸರ್ಕಾರ ನಿಲುವು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಆಗ ಯತ್ನಾಳ್ ಅವರಿಗೆ ಯಡಿಯೂರಪ್ಪ ಇಂತಹದೊಂದು ಟಾಸ್ಕ್ ನೀಡಿದರು. ನಮ್ಮದು ರಾಷ್ಟ್ರೀಯ ಪಕ್ಷ. ಮೀಸಲಾತಿ ಸೇರಿದಂತೆ ಯಾವುದೇ ವಿಷಯ ಬಂದರೂ ಕೇಂದ್ರದಲ್ಲಿ ಪ್ರಧಾನಿ ಹಾಗೂ ಉಳಿದ ನಾಯಕರೊಂದಿಗೆ ಚರ್ಚಿಸಿ ತೀರ್ಮಾನ ಮಾಡಬೇಕು. ರಾಜ್ಯವೇ ನಿರ್ಧಾರ ಮಾಡಲು ಆಗುವುದಿಲ್ಲ. ಈ ಬಗ್ಗೆ ನೀವೇ ದೆಹಲಿಗೆ ರಾಜ್ಯದ 25 ಸಂಸದರೊಂದಿಗೆ ದೆಹಲಿಗೆ ನಿಯೋಗ ಒಯ್ದು ಕೇಂದ್ರ ನಾಯಕರ ಮೇಲೆ ಒತ್ತಡ ತನ್ನಿ ಎಂದು ಹೇಳಿದರು.

ಯಡಿಯೂರಪ್ಪ ಅವರ ಈ ಉತ್ತರಕ್ಕೆ ಆಡಳಿತ ಪಕ್ಷದ ಕೆಲ ಸದಸ್ಯರೂ ಸೇರಿದಂತೆ ಪ್ರತಿಪಕ್ಷಗಳ ಸದಸ್ಯರಿಂದ ಆಕ್ಷೇಪ ವ್ಯಕ್ತವಾಯಿತು. ಕೆಲ ಸದಸ್ಯರು ಮೋದಿ ಅವರ ಹೆಸರೇಳಿಕೊಂಡು ಬೇರೆಲ್ಲ ಮಾಡುತ್ತೀರಿ, ಇದು ಆಗುವುದಿಲ್ಲವೇ ಎಂದು ಕುಟುಕಿದರು. ರಾಜ್ಯ ಸರ್ಕಾರ ಈ ಸಂಬಂಧ ನಿರ್ಣಯ ಕೈಗೊಂಡು ಕೇಂದ್ರಕ್ಕೆ ಶಿಫಾರಸು ಮಾಡಬೇಕು. ಆಗ ಕೇಂದ್ರ ಸರ್ಕಾರ ಮೀಸಲಾತಿ ನೀಡಲು ಕ್ರಮ ಕೈಗೊಳ್ಳಲು ಸಾಧ್ಯ ಎಂದರು.